OCTOBER 08, 2025

# AKASHAVANI - DHARWAD

# PRADESH SAMACHARA (KANNADA) 12 PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

ರಾಜ್ಯದ ಎಲ್ಲ ತಾಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ, ತಲಾ ಒಬ್ಬರಂತೆ ಮಕ್ಕಳ ವೈದ್ಯರು, ಸ್ತ್ರೀ ರೋಗ ತಜ್ಞರು, ರೆಡಿಯಾಲಜಿಸ್ಟ್, ಅರಿವಳಿಕೆ ತಜ್ಞರನ್ನು ನೇಮಕ ಮಾಡಲು ತೀರ್ಮಾನ ಕೈಗೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆ, ಕೊಪ್ಪ ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು  ಉದ್ಘಾಟಿಸಿ ಅವರು ಮಾತನಾಡಿದರು. ವೈದ್ಯರ ನೇಮಕಾತಿ ಜೊತೆಗೆ, ತಾಯಿ– ಮಗುವಿನ ಆರೋಗ್ಯಕ್ಕೂ ಆದ್ಯತೆ ನೀಡಲಾಗಿದೆ ಎಂದರು.ಇದಕ್ಕೂ ಮುನ್ನ ಸಚಿವರು ಶೃಂಗೇರಿ ಬಳಿಯ, ಬೆಳ್ಳಂದೂರಿನಲ್ಲಿ 100 ಹಾಸಿಗೆ ಸಾಮರ್ಥ್ಯದ ಸರ್ಕಾರಿ ಆಸ್ಪತ್ರೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದರು.

<><><>

ರಾಜ್ಯ ಸರ್ಕಾರವು ವಿಶ್ವ ಕರ್ಮ ಅಭಿವೃದ್ಧಿ ನಿಗಮ ಮಂಡಳಿಗೆ, 50 ಕೋಟಿ ರೂಪಾಯಿ ಅನುದಾನ ನಿಗದಿಪಡಿಸಿದೆ. ಹೆಚ್ಚಿನ ಆರ್ಥಿಕ ನೆರವು ಸರ್ಕಾರದಿಂದ ಪಡೆಯುವುದರ ಜೊತೆಗೆ, ಚಿನ್ನ ಹಾಗೂ ಬೆಳ್ಳಿ ಆಭರಣಗಳ ಮೇಲಿನ ಜಿಎಸ್‌ಟಿ; ಪಾಲು ನಿಗಮಕ್ಕೆ ನೀಡುವಂತೆ ಕೋರಲಾಗುವುದು ಎಂದು ಕರ್ನಾಟಕ ರಾಜ್ಯ ವಿಶ್ವ ಕರ್ಮ ಅಭಿವೃದ್ಧಿ ನಿಗಮದ ನೂತನ ಅಧ್ಯಕ್ಷ ಸುಜ್ಞಾನಮೂರ್ತಿ ತಿಳಿಸಿದರು. ರಾಯಚೂರಿನಲ್ಲಿ ಮಾತನಾಡಿದ ಅವರು,  ರಾಜ್ಯದ ಉದ್ದಕ್ಕೂ ಸಂಚರಿಸಿ, ಕೌಶಲ ಅಭಿವೃದ್ಧಿ ಯೋಜನೆಗಳು ಸಹಿತ ಸಾಲ ಸೌಲಭ್ಯಗಳ ಸಮರ್ಪಕತೆ ಕುರಿತಂತೆ ಸಭೆಗಳನ್ನು ಆಯೋಜಿಸಲಾಗುವುದು ಎಂದರು.

<><><>

ನಾಡಿನಾದ್ಯಂತ ಮಹರ್ಷಿ ಶ್ರೀ ವಾಲ್ಮೀಕಿ ಜಯಂತಿ ಶ್ರದ್ಧಾಭಕ್ತಿಯಿಂದ ಜರುಗಿತು.  ಆದಿಕವಿ ವಾಲ್ಮೀಕಿ ರಚಿಸಿದ ರಾಮಾಯಣ ಮಹಾಕಾವ್ಯ, ನ್ಯಾಯ, ನೀತಿ , ಧರ್ಮದ ಸಾರವನ್ನು ತಿಳಿಸುತ್ತದೆ. ಮೌಲ್ಯವನ್ನು ಬಿತ್ತುವ ಹಾಗೂ ತ್ಯಾಗ ಮನೋಭಾವ ಬೆಳೆಸುವ ಅರಿವು ರಾಮಾಯಣದ ಮೂಲಕ ಲಭಿಸುತ್ತದೆ ಎಂದು ಸಾಹಿತಿ ಬಸವರಾಜ ಗೊರವರ ಹೇಳಿದರು. ಧಾರವಾಡದಲ್ಲಿ, ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಅವರು, ವಿಶೇಷ ಉಪನ್ಯಾಸ ನೀಡಿದರು.

ರಾಮನಗರ ಜಿಲ್ಲಾಡಳಿತ ಭವನದಲ್ಲಿ ಜರುಗಿದ, ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಪ್ರಪಂಚದ ಲಿಪಿ ಇರುವ ಎಲ್ಲ ಭಾ ೆಗಳಿಗೂ ಅನುವಾದಗೊಂಡಿರುವ, ಮಹಾ ಕಾವ್ಯ ರಾಮಾಯಣ, ಇದನ್ನು ರಚಿಸಿದ ಕೀರ್ತಿ ಆದಿ ಕವಿ ವಾಲ್ಮಿಕಿ ಮಹರ್ಷಿಯವರಿಗೆ ಸಲ್ಲುತ್ತದೆ ಎಂದರು.

<><><>

ಬೆಂಗಳೂರು ವಿಧಾನಸೌಧದ, ಸಮ್ಮೇಳನ ಸಭಾಂಗಣದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಐವರು ಸಾಧಕರಿಗೆ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರದಾನಿಸಿ ಗೌರವಿಸಿದರು. ಪ್ರಶಸ್ತಿ ಸ್ವೀಕರಿಸಿದ, ಕೊಡಗು ಜಿಲ್ಲೆ, ದಿಡ್ಡಳ್ಳಿ ಹಾಡಿಯ, ಜನರ ಪುನರ್ವಸತಿಗಾಗಿ ಶ್ರಮಿಸಿದ, ಜೆ.ಕೆ ಮುತ್ತಮ್ಮ ಅವರು, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಧ್ವನಿ: ಜೆ.ಕೆ ಮುತ್ತಮ್ಮ 35 ಸೆಕೆಂದುಗಳು

<><><>

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ನಡೆಸುತ್ತಿರುವ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ಅವಧಿಯನ್ನು ವಿಸ್ತರಿಸಲಾಗಿದೆ. ಸರ್ಕಾರದ ಆದೇಶದಂತೆ ಬೆಳಗಾವಿ ವಿಭಾಗದ, 9 ಜಿಲ್ಲೆಗಳ ವ್ಯಾಪ್ತಿಯ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ, 18 ರ ವರೆಗೆ ರಜೆ ಘೋಷಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ, ಕಿತ್ತೂರು ಕರ್ನಾಟಕ ಶೈಕ್ಷಣಿಕ ವಲಯದ, ಹೆಚ್ಚುವರಿ ಆಯುಕ್ತ ಡಾಕ್ಟರ ಈಶ್ವರ ಉಳ್ಳಾಗಡ್ಡಿ ತಿಳಿಸಿದ್ದಾರೆ. ಶಿಕ್ಷಕರು ಸಮೀಕ್ಷೆಗೆ ನಿಯೋಜನೆಗೊಂಡಿರುವ ಹಿನ್ನೆಲೆ, ರಜೆ ದಿನಗಳಲ್ಲಿ ಬಾಕಿ ಉಳಿಯುವ, ಪಠ್ಯ ಬೋಧನೆಯನ್ನು, ವಿಶೇಷ ತರಗತಿ ಆಯೋಜನೆ ಮೂಲಕ ಸರಿದೂಗಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

<><><>

ಉತ್ತರ ಕನ್ನಡ ಜಿಲ್ಲೆಯಲ್ಲಿ, ಇದುವರೆಗೆ 2 ಲಕ್ಷ 97 ಸಾವಿರದ 347 ಮನೆಗಳ ಸಮೀಕ್ಷೆಯನ್ನು ಪೂರ್ಣಗೊಳಿಸಲಾಗಿದೆ. ಶೇಕಡ 88 ದಶಾಂಶ 9, 8 ರ ್ಟ ಸಾಧನೆ ಮಾಡಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

<><><>

ಮಾಜಿ ವಿಧಾನ ಪರಿಷತ್ ಸದಸ್ಯ, ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಕ್ಷೇತ್ರೀಯ ಕಾರ್ಯವಾಹರಾಗಿ ಸೇವೆ ಸಲ್ಲಿಸಿದ್ದ ಕೃ. ನರಹರಿ ಅವರು, ಬೆಂಗಳೂರಿನಲ್ಲಿ ಇಂದು ಬೆಳಗ್ಗೆ ನಿಧನ ಹೊಂದಿದರು. ಅವರಿಗೆ 93 ವರ್ಷ ವಯಸ್ಸಾಗಿತ್ತು. ದಿ ಮಿಥಿಕ್ ಸೊಸೈಟಿ ಅಧ್ಯಕ್ಷರಾಗಿಯೂ ಅವರು ಸೇವೆ ಸಲ್ಲಿಸಿದ್ದರು. ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಷಿ ಸೇರಿದಂತೆ ಗಣ್ಯರು ಕಂಬನಿ ಮಿಡಿದಿದ್ದು, ಸಂತಾಪ ಸೂಚಿಸಿದ್ದಾರೆ.

<><><>

ಇಂದು ಭಾರತೀಯ ವಾಯುಪಡೆ ದಿನ. 1932, ಅಕ್ಟೋಬರ್ 8 ರಂದು ಸ್ಥಾಪನೆಯಾದ, ಭಾರತೀಯ ವಾಯುಪಡೆ (IAF), ರಾಷ್ಟ್ರದ ರಕ್ಷಣೆಯನ್ನು ರೂಪಿಸುವ, ರಕ್ಷಣಾ ಕಾರ್ಯತಂತ್ರದ ನಿರ್ಣಾಯಕ ಸ್ತಂಭವಾಗಿ ನಿಂತಿದೆ. 93 ನೇ ವರ್ಷಾಚರಣೆ ಸಂದರ್ಭ, ಭಾರತೀಯ ವಾಯಪಡೆಗೆ ಕೇಂದ್ರ ಗೃಹ ಖಾತೆ ಸಚಿವ ಅಮಿತ್ ಶಾ ಶುಭ ಹಾರೈಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>